# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 492(506) |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11-12-2025 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪ್ರಮುಖ ಪ್ರವಾಸಿ ತಾಣಗಳ ಸಂರಕ್ಷಣೆ, ಅಭಿವೃದ್ಧಿ ಮತ್ತು ಪ್ರಚಾರಕ್ಕಾಗಿ ಸರ್ಕಾರ ಹೊಸದಾಗಿ ಕೈಗೊಂಡಿರುವ ಯೋಜನೆಗಳು ಯಾವುವು; | **ಪ್ರವಾಸಿ ತಾಣಗಳ ಸಂರಕ್ಷಣೆ, ಅಭಿವೃದ್ಧಿ ಮತ್ತು ಪ್ರಚಾರಕ್ಕಾಗಿ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳು :**<br>ಕರ್ನಾಟಕ ಪ್ರವಾಸೋದ್ಯಮವನ್ನು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ ಪಡಿಸುವ ದೃಷ್ಟಿಯಿಂದ ಹಾಗೂ ಕರ್ನಾಟಕ ರಾಜ್ಯ ಪ್ರವಾಸಿ ತಾಣಗಳನ್ನು ಹಾಗೂ ನಾಡಿನ ಕಲೆ, ಸಂಸ್ಕೃತಿ, ಸಾಂಸ್ಕೃತಿಕ ಪರಂಪರೆ ಸೇರಿದಂತೆ ವಾಸ್ತುಶಿಲ್ಪವನ್ನು ಇತರೆ ರಾಷ್ಟ್ರಗಳಿಗೆ ಪರಿಚಯಿಸುವ ಸಲುವಾಗಿ ಹಾಗೂ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರವಾಸಿಗರನ್ನು ಆಕರ್ಷಿಸಲು ವಿವಿಧ ದೇಶಗಳಲ್ಲಿ ನಡೆಯಲಿರುವ ಪ್ರಮುಖ ಅಂತರಾಷ್ಟ್ರೀಯ ಮೇಳ/ರೋಡ್‌ಷೋಗಳಲ್ಲಿ ಹಾಗೂ ದೇಶದ ವಿವಿಧ ಭಾಗಗಳಲ್ಲಿ ಆಯೋಜಿಸಲ್ಪಡುವ ವಿವಿಧ ರಾಷ್ಟ್ರೀಯ ಮೇಳಗಳಲ್ಲಿ ಇಲಾಖೆಯು ಪ್ರತ್ಯೇಕವಾಗಿ ಮಳಿಗೆ ಜಾಗವನ್ನು ಪಡೆದು ನಾಡಿನ ಕಲೆ, ಸಂಸ್ಕೃತಿ, ಪರಂಪರೆ, ಶ್ರೀಮಂತ ಇತಿಹಾಸ, ವನ್ಯಜೀವಿ ಮತ್ತು ಪ್ರವಾಸಿ ತಾಣಗಳ ಅತ್ಯಾಕರ್ಷಕ ವಿನ್ಯಾಸಗಳಲ್ಲಿ ಮಳಿಗೆಯನ್ನು ತೆರೆದು, ಹಾಗೂ ರಾಜ್ಯದ ಪ್ರವಾಸಿ ಭಾಗಿದಾರರೊಂದಿಗೆ ಈ ಮೇಳಗಳ ಸಂದರ್ಭದಲ್ಲಿ ಇಲಾಖಾ ವತಿಯಿಂದ ರಾಷ್ಟ್ರ & ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರಮುಖ ನಗರಗಳಲ್ಲಿ ಇಲಾಖಾ ವತಿಯಿಂದ B2B ರೋಡ್-ಷೋ ಕಾರ್ಯಕ್ರಮಗಳನ್ನು ಸಹ ಯಶಸ್ವಿಯಾಗಿ ಆಯೋಜಿಸಲಾಗಿರುತ್ತದೆ. ಇದರೊಂದಿಗೆ 2024-25ನೇ ಸಾಲಿನಲ್ಲಿ ಬೆಂಗಳೂರಿನಲ್ಲಿ ದಿನಾಂಕ:26-02-2025 ರಿಂದ 28-02-2025ರ ವರೆಗೆ ಕರ್ನಾಟಕ ಇಂಟರ್‌ನ್ಯಾಷನಲ್ ಟ್ರಾವೆಲ್ ಎಕ್ಸ್‌ಪೋವನ್ನು (KITE) ಪ್ರವಾಸೋದ್ಯಮ ಇಲಾಖೆಯಿಂದ |

| | | |
|---|---|---|
| | | Bengaluru International Exhibition Center (BIEC) ನಲ್ಲಿ ಆಯೋಜಿಸಲಾಗಿರುತ್ತದೆ. ಹಾಗೂ ಪ್ರವಾಸಿಗರ ಅನುಕೂಲಕ್ಕಾಗಿ ಪ್ರವಾಸಿ ತಾಣಗಳಲ್ಲಿ ಸೈನೇಜ್‌ಗಳು ಮತ್ತು ಹೋರ್ಡಿಂಗ್ಸ್‌ಗಳನ್ನು ಇಲಾಖೆಯಿಂದ ಅಳವಡಿಸಲಾಗಿರುತ್ತದೆ.<br><br>**ಪ್ರವಾಸಿ ತಾಣಗಳ ಸಂರಕ್ಷಣೆ, ಅಭಿವೃದ್ಧಿ ಮತ್ತು ಪ್ರಚಾರಕ್ಕಾಗಿ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳು :**<br><br>**ಸಂರಕ್ಷಣಾ ಯೋಜನೆ:** ಕರ್ನಾಟಕ ರಾಜ್ಯಾದ್ಯಂತ ಅವಜ್ಞತೆಗೆ ತುತ್ತಾಗಿರುವ ಅನೇಕ ಅರಕ್ಷಿತ ಸ್ಮಾರಕಗಳು ಮತ್ತು ಇತರೆ ಪ್ರಾಚ್ಯಾವಶೇಷಗಳನ್ನು ಗುರುತಿಸಿ ಸಂರಕ್ಷಿಸಲು ಮತ್ತು ಅರಕ್ಷಿಯ ಸ್ಮಾರಕಗಳನ್ನು ರಕ್ಷಿತ ಸ್ಮಾರಕಗಳೆಂದು ಘೋಷಿಸಲು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಹಾಗೂ ಪುರಾತತ್ವ ವಿಷಯಗಳಲ್ಲಿ ಪರಿಣಿತಿ ಹೊಂದಿರುವ ತಜ್ಞರ ಸಹಯೋಗದೊಂದಿಗೆ ಗ್ರಾಮಾವಾರು ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆ.<br><br>**ಪ್ರಾಚ್ಯಪ್ರಜ್ಞೆ ಯೋಜನೆ:** ರಾಜ್ಯದಲ್ಲಿನ ಪಾರಂಪರಿಕ ಕಟ್ಟಡಗಳು, ಸ್ಮಾರಕಗಳು, ಶಾಸನಗಳು, ದೇವಸ್ಥಾನ, ಮಸೀದಿ, ಚರ್ಚ್‌ಗಳು, ಇತ್ಯಾದಿಗಳ ಇತಿಹಾಸ, ಪ್ರಾಮುಖ್ಯತೆ ಮತ್ತು ಪರಂಪರೆಯ ಬಗ್ಗೆ ಶಾಲಾ ಮಕ್ಕಳಿಗೆ ಪ್ರೌಢಶಾಲಾ ಹಂತದಲ್ಲಿಯೇ ಅರಿವು ಮತ್ತು ಜಾಗೃತಿ ಮೂಡಿಸಲು ತಾಲ್ಲೂಕು ಮತ್ತು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಭಾಷಣ, ಚಿತ್ರಕಲೆ, ಪ್ರಬಂಧ ಮತ್ತು ರಸಪ್ರಶ್ನೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.<br><br>**ಸ್ಮಾರಕ ದತ್ತು ಯೋಜನೆ :** ಕರ್ನಾಟಕ ರಾಜ್ಯದಲ್ಲಿರುವ ಇತಿಹಾಸ ಪ್ರಸಿದ್ಧ ಸ್ಮಾರಕಗಳನ್ನು ಸಂರಕ್ಷಿಸಲು ಮತ್ತು ಮೂಲಭೂತ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲು Adopt A Monument ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಈ ಯೋಜನೆ ಯಡಿಯಲ್ಲಿ ಒಟ್ಟು ನಾಲ್ಕು ಸಂಸ್ಥೆಯವರು 13 ಸ್ಮಾರಕಗಳ ಸಂರಕ್ಷಣೆಗೆ ಆಸಕ್ತಿ ವ್ಯಕ್ತಪಡಿಸಿರುತ್ತಾರೆ. |

| | | |
|---|---|---|
| | | **ಗ್ರಾಮಾವಾರು ಸರ್ವೆ ಯೋಜನೆ:** 2019-20ನೇ ಸಾಲಿನಲ್ಲಿ ಇಲಾಖೆಯ ಕಾರ್ಯಕ್ರಮವಾದ "ಸಂರಕ್ಷಣಾ ಯೋಜನೆ" ಅಡಿಯಲ್ಲಿ ಕರ್ನಾಟಕ ರಾಜ್ಯಾದ್ಯಂತ ಅವಜ್ಞತೆಗೆ ತುತ್ತಾಗಿರುವ ಅನೇಕ ಅರಕ್ಷಿತ ಸ್ಮಾರಕಗಳು ಮತ್ತು ಇತರೆ ಪ್ರಾಚ್ಯಾವಶೇಷಗಳನ್ನು ಗುರುತಿಸಲು ಪ್ರಸ್ತುತ ಸಾಲಿನಲ್ಲಿ 119 ತಾಲ್ಲೂಕುಗಳ ಸರ್ವೆ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ. ಇನ್ನುಳಿದಂತೆ ಬಾಕಿ ಇರುವ 119 ತಾಲ್ಲೂಕುಗಳ ಸರ್ವೆ ಕಾರ್ಯವನ್ನು ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಹಾಗೂ ಪುರಾತತ್ವ ವಿಷಯಗಳಲ್ಲಿ ಪರಿಣಿತಿ ಹೊಂದಿರುವ ತಜ್ಞರ ಸಹಯೋಗದೊಂದಿಗೆ ಗ್ರಾಮಾವಾರು ಸರ್ವೆ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಈ ಸರ್ವೇ ಕಾರ್ಯದಲ್ಲಿ ಕಂಡು ಬರುವ ಅರಕ್ಷಿತ ಸ್ಮಾರಕಗಳನ್ನು ರಕ್ಷಿತ ಸ್ಮಾರಕಗಳೆಂದು ಘೋಷಿಸಲು ಕ್ರಮವಹಿಸಲಾಗುತ್ತಿದೆ.<br>ಪರಂಪರೆ ಕೂಟ: ರಾಜ್ಯದಲ್ಲಿರುವ ಸ್ಮಾರಕಗಳು, ಪಾರಂಪರಿಕ ಕಟ್ಟಡಗಳ ಬಗ್ಗೆ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಸಂಬಂಧ ಪರಂಪರೆ ಕೂಟವನ್ನು ರಚಿಸಿ ಆ ಮೂಲಕ ವಿದ್ಯಾರ್ಥಿಗಳನ್ನು ಪರಂಪರೆ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ.<br>ಇಲಾಖೆಯ ಸಂರಕ್ಷಣಾ ಯೋಜನೆಯಡಿಯಲ್ಲಿ ಗ್ರಾಮವಾರು ಪ್ರಾಚ್ಯವಶೇಷಗಳ ಸರ್ವೇ ಕಾರ್ಯವನ್ನು ಪ್ರಾರಂಭಿಸಲಾಗಿರುತ್ತದೆ. ಈ ಸರ್ವೇ ಕಾರ್ಯದಲ್ಲಿ ಕಂಡುಬರುವ ಪ್ರಾಚ್ಯವಶೇಷಗಳನ್ನು ಮತ್ತು ಸ್ಮಾರಕಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ಸಂರಕ್ಷಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಪಶ್ಚಿಮ ಘಟ್ಟ, ಕರಾವಳಿ, ಕಡಲತೀರ, ಹಂಪಿ, ಮೈಸೂರು ಸೇರಿದಂತೆ ಐತಿಹಾಸಿಕ ಮತ್ತು ನೈಸರ್ಗಿಕ ತಾಣಗಳ ಸಂರಕ್ಷಣೆ ಮತ್ತು ಪ್ರವಾಸಿಗರ ಅನುಕೂಲತೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ರಾಜ್ಯದ ಎಲ್ಲಾ ರೀತಿಯ ಪ್ರವಾಸಿ ತಾಣಗಳನ್ನು ಒಳಗೊಂಡಂತೆ ಪ್ರವಾಸೋದ್ಯಮ ತಾಣಗಳ ಸಂರಕ್ಷಣೆ ಹಾಗೂ ಪ್ರವಾಸಿಗರ ಅನುಕೂಲಕ್ಕಾಗಿ ಅಗತ್ಯವಾಗಿರುವ ಪ್ರವಾಸಿ ಮೂಲ ಸೌಲಭ್ಯ ಕಾಮಗಾರಿಗಳನ್ನು ಇಲಾಖೆಯಲ್ಲಿ ಲಭ್ಯವಿರುವ ಅನುದಾನದನ್ವಯ ಹಂತ ಹಂತವಾಗಿ ಒದಗಿಸಲಾಗುತ್ತದೆ. |

| | | |
|---|---|---|
| | | ಇದಲ್ಲದೆ ಪ್ರವಾಸಿ ಸೌಲಭ್ಯಗಳ ಅಭಿವೃದ್ಧಿಗಾಗಿ ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಗುರುತ್ತಿಸಿರುವ 25 ಉತ್ಪನ್ನಗಳಲ್ಲಿ ಹೂಡಿಕೆಮಾಡಲು ಮುಂದೆಬರುವ ಖಾಸಗಿ ಹೂಡಿಕೆದಾರರಿಗೆ ಸಹಾಯಧನ, ಉತ್ತೇಜನ, ರಿಯಾಯಿತಿಗಳನ್ನು ನೀಡುವ ಮೂಲಕ ಪ್ರೋತ್ಸಾಹ ನೀಡಲಾಗುತ್ತಿದೆ. |
| ಇ) | ಈ ಪ್ರವಾಸಿ ತಾಣಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗಾಗಿ ಇರುವಂತಹ ಪ್ರಸ್ತುತ ಸುರಕ್ಷತಾ ಕ್ರಮಗಳೇನು; ಮಹಿಳೆಯರಿಗೆ ಸರಿಯಾದ ವಿಶ್ರಾಂತಿ ಕೇಂದ್ರಗಳು, ಶಿಶುವಿಹಾರ ಕೇಂದ್ರಗಳು, ಸುಸಜ್ಜಿತ ಶೌಚಾಲಯಗಳು ಇವೆಯೇ; | ರಾಜ್ಯದ ಪ್ರಮುಖ ಪ್ರವಾಸಿ ತಾಣಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಒಳಗೊಂಡಂತೆ ಎಲ್ಲಾ ಪ್ರವಾಸಿಗರ ಸುರಕ್ಷತೆ ಮತ್ತು ಭದ್ರತೆಗಾಗಿ ಪ್ರವಾಸೋದ್ಯಮ ಇಲಾಖೆಯಿಂದ ತರಬೇತಿ ನೀಡಿದೆ. ಪ್ರಸ್ತುತ 665 ಪ್ರವಾಸಿ ಮಿತ್ರರನ್ನು ನಿಯೋಜಿಸಲಾಗಿದೆ.<br>ಸದರಿ ಪ್ರಮುಖ ಪ್ರವಾಸಿ ತಾಣಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಒಳಗೊಂಡಂತೆ ಎಲ್ಲಾ ಪ್ರವಾಸಿಗರ ಅನುಕೂಲಕ್ಕಾಗಿ ಮೂಲಭೂತ ಸೌಕರ್ಯ, ವಿಶ್ರಾಂತಿ ಗೃಹಗಳನ್ನು ಇಲಾಖೆಗೆ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಪರಿಶೀಲಿಸಿ ಇಲಾಖೆಗೆ ಅಯವ್ಯಯದಲ್ಲಿ ಒದಗಿಸುವ ಅನುದಾನ ಲಭ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಕಲ್ಪಿಸಲು ಕ್ರಮ ವಹಿಸಲಾಗುತ್ತಿದೆ.<br>ಇದಲ್ಲದೆ ಪ್ರವಾಸಿ ತಾಣಗಳಲ್ಲಿ ಧೂಮಪಾನ, ಮಧ್ಯಪಾನ ಮತ್ತು ಇತರೆ ನಶೆ ಆಧಾರಿತ ವಸ್ತುಗಳ ಸೇವನೆಯನ್ನು ತಡೆಯಲು ನಾಮಫಲಕಗಳು ನೇಮಿಸುವುದು ಸಂಬಂಧ ಪಟ್ಟ ಸ್ಥಳೀಯ ಸಂಸ್ಥೆ ಪ್ರಾಧಿಕಾರಗಳು/ ಮಂಡಳಿಗಳು/ ನಿಗಮ/ ಇಲಾಖೆರವರ ಜವಾಬ್ದಾರಿ ಆಗಿರುತ್ತದೆ. |
| ಈ) | ಈ ಪ್ರವಾಸಿ ತಾಣಗಳಲ್ಲಿ ಧೂಮಪಾನ, ಮದ್ಯ ಸೇವನೆ ಮತ್ತು ಇತರೆ ನಶೆ ಆಧಾರಿತ ವಸ್ತುಗಳ ಸೇವನೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

**ಸಂಖ್ಯೆ: ಟಿಓಆರ್ 261 ಟಿಡಿವಿ 2025**

**(ಹೆಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು